# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 1033 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:21-06-2019.

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

"ಇಂದೇ" ಅತಿ ತುರ್ತು

ಇವರಿಗೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
2) ಉಪಕಾರ್ಯದರ್ಶಿಗಳು (ಅಭಿವೃದ್ಧಿ)
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಒತ್ತುವರಿಗಳನ್ನು ತೆರವುಗೊಳಿಸಿರುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 115 ಜಿಪಸ 2011 ದಿನಾಂಕ:04-06-2011.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 346 ಗ್ರಾಪಂಅ 2013 ದಿನಾಂಕ:17-08-2013.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಒತ್ತುವರಿಗಳನ್ನು ತೆರವುಗೊಳಿಸುವ) ನಿಯಮಗಳು, 2011 ನ್ನು ರಚಿಸಲಾಗಿದ್ದು, ಸದರಿ ನಿಯಮಗಳನ್ವಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳನ್ನು ಒತ್ತುವರಿ ಮಾಡಿಕೊಂಡಿರುವುದನ್ನು ತೆರವುಗೊಳಿಸುವ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ.

ಉಲ್ಲೇಖ(2) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಸಾರ್ವಜನಿಕ ಆಸ್ತಿಯ ಒತ್ತುವರಿಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಒತ್ತುವರಿ ಆಸ್ತಿಗಳಿಗೆ ಸಂಬಂಧಿಸಿದಂತೆ ದಿನಾಂಕ:18-06-2019 ರಂದು ನಡೆದ ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿ ಸಭೆಯು ಒತ್ತುವರಿಗಳನ್ನು ತೆರವುಗೊಳಿಸಲು ಇದುವರೆವಿಗೂ ಕ್ರಮ ಕೈಗೊಳ್ಳದಿರುವುದಕ್ಕೆ ತೀವ್ರ ಅಸಮಾಧಾನವನ್ನು ವ್ಯಕ್ತಪಡಿಸಿರುತ್ತದೆ. ಕೆಲವು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನೀಡಿರುವ ಮಾಹಿತಿಯು ಸಮರ್ಪಕವಾಗದಿರುವುದು ಕಂಡು ಬಂದಿರುತ್ತದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಒತ್ತುವರಿ ಆಸ್ತಿಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಒಂದು ತಿಂಗಳೊಳಗಾಗಿ ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಗೆ ಒದಗಿಸಲು ಸಮಿತಿಯು ನಿರ್ದೇಶನ ನೀಡಿರುತ್ತದೆ.

ವಿಷಯ ಸೂಚಿ: ಗ್ರಾಮ ಪಂಚಾಯತಿ ಆಸ್ತಿಗಳೆಂದರೆ ಗ್ರಾಮಠಾಣಾ, ಸಾರ್ವಜನಿಕ ರಸ್ತೆ, ಕಾಲುವೆಗಳು, ಕೆರೆಗಳು, ಆಟದ ಮೈದಾನ, ಉದ್ಯಾನವನಗಳು, ಸಾರ್ವಜನಿಕರ ಉಪಯೋಗಕ್ಕಾಗಿ ಇರಿಸಿರುವ ಪ್ರದೇಶ, ಸ್ಮಶಾನ ಅಥವಾ ರುದ್ರಭೂಮಿ, ನಿವೇಶನ, ಚರಂಡಿ, ಘಟಾರ, ಗ್ರಾಮ ಸಾರ ಚರಂಡಿ ಇತ್ಯಾದಿ.

ಆದುದರಿಂದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಒತ್ತುವರಿ ಆಸ್ತಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಕ್ರಮ ಕೈಗೊಳ್ಳುವಂತೆ ತಿಳಿಸಿದೆ.

1. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಒತ್ತುವರಿ ಆಸ್ತಿಗಳನ್ನು ಕೂಡಲೇ ಗುರುತಿಸಿ ಒತ್ತುವರಿ ಆಸ್ತಿ ಎಂದು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನಾಮಫಲಕ (ನೋಟೀಸು ಬೋರ್ಡ್) ಅಳವಡಿಸತಕ್ಕದ್ದು.
2. ಗ್ರಾಮ ಪಂಚಾಯತಿಗಳ ಆಸ್ತಿಗಳ ಒತ್ತುವರಿ ಮಾಡಿರುವ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 115 ಜಿಪಸ 2011 ದಿನಾಂಕ:04-06-2011 ರ ಅನುಸಾರ ಕ್ರಮ ವಹಿಸತಕ್ಕದ್ದು.
3. ಗುರುತಿಸಲಾದ ಆಸ್ತಿ ಒತ್ತುವರಿ ಪ್ರಕರಣಗಳನ್ನು ಸಂಬಂಧಿಸಿದ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಸಕ್ಷಮ ಪ್ರಾಧಿಕಾರವಾದ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗೆ ವರದಿ ಮಾಡತಕ್ಕದ್ದು.
4. ನಿಯಮಾನುಸಾರ ಒತ್ತುವರಿಯಾದ ಆಸ್ತಿಗಳನ್ನು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯು ತೆರವುಗೊಳಿಸಲು ಕೂಡಲೇ ಕ್ರಮ ಕೈಗೊಳ್ಳತಕ್ಕದ್ದು.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಒತ್ತುವರಿ ಆಸ್ತಿಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿ ಸಭೆಗೆ ಮಾಹಿತಿ ಒದಗಿಸಬೇಕಾಗಿದ್ದು, ಈಗಾಗಲೇ ಒದಗಿಸಿರುವ ಮಾಹಿತಿಯು ವಿಷಯ ಸೂಚಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದ ಮಾಹಿತಿಯಾಗಿದೆಯೇ ಎಂಬುದನ್ನು ಮತ್ತೊಮ್ಮೆ ಪರಿಶೀಲಿಸಿಕೊಂಡು ಈಗಾಗಲೇ ಮಾಹಿತಿ ನೀಡಿದ್ದರೂ ವೈಯಕ್ತಿಕ ಗಮನಹರಿಸಿ (ಇಮೇಲ್ ವಿಳಾಸ sogp 2011 @ gmail.com ಮೂಲಕ) hard copy (hard copyಎಂದರೆ ಸಹಿ ಮಾಡಿದ ಪ್ರತಿ) ಮತ್ತು (soft copy ಎಂದರೆ ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿರುವುದು) ಈ ಕೆಳಕಂಡ ನಮೂನೆ-1 ಮತ್ತು 2 ರಲ್ಲಿ ಮಾಹಿತಿಯನ್ನು ದಿನಾಂಕ:30-06-2019 ರೊಳಗೆ ಸರ್ಕಾರಕ್ಕೆ ಸಲ್ಲಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

**ನಮೂನೆ-1**

| ಜಿಲ್ಲೆ | ಒತ್ತುವರಿಯಾದ ಆಸ್ತಿಗಳ ಸಂಖ್ಯೆ | ಒತ್ತುವರಿ ಯನ್ನು ತೆರವುಗೊಳಿಸಿದ ಆಸ್ತಿಗಳ ಸಂಖ್ಯೆ. | ತೆರವುಗೊಳಿಸಲು ಬಾಕಿ ಇರುವ ಆಸ್ತಿಗಳ ಸಂಖ್ಯೆ | ಒತ್ತುವರಿ ಮಾಡಿದಂತಹ ವ್ಯಕ್ತಿಗಳಿಂದ **penalty Clause** ಪ್ರಕಾರ ಸಂಗ್ರಹಿಸಿದ ಒಟ್ಟು ಮೊತ್ತ |
|---|---|---|---|---|
| 1 | 2 | 3 | 4 | 5 |

**ನಮೂನೆ-2**

| ಜಿಲ್ಲೆ | ತಾಲ್ಲೂಕು | ಗ್ರಾಮ ಪಂಚಾಯತಿ ಹೆಸರು | ಗ್ರಾಮದ ಹೆಸರು | ವಿಸ್ತೀರ್ಣ ದೊಂದಿಗೆ ಒತ್ತುವರಿ ಮಾಡ ಆಸ್ತಿಯ ವಿವರ | ಒತ್ತುವರಿಯನ್ನು ಯಾವ ದಿನಾಂಕದಂದು ತೆರವುಗೊಳಿಸಲಾಗಿದೆಯೇ? | ಒತ್ತುವರಿ ಬಗ್ಗೆ ಯಾವ ರೀತಿ ಕ್ರಮ ತೆಗೆದುಕೊಳ್ಳಲಾಗಿದೆ ಎಂಬ ಬಗ್ಗೆ ದಿನಾಂಕದೊಂದಿಗೆ ಮಾಹಿತಿ ನೀಡುವುದು. | ಒತ್ತುವರಿ ತೆರವುಗೊಳಿಸಿದ ಆಸ್ತಿಯನ್ನು ಯಾವ ಉಪಯೋಗಕ್ಕಾಗಿ ಬಳಸಿಕೊಳ್ಳಲಾಗಿದೆಯೇ? | ಒತ್ತುವರಿ ಮಾಡಿದಂತಹ ವ್ಯಕ್ತಿಗಳಿಂದ **penalty Clause** ಪ್ರಕಾರ ಸಂಗ್ರಹಿಸಿದ ಒಟ್ಟು ಮೊತ್ತ | ಷರಾ |
|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 |

ತಮ್ಮ ವಿಶ್ವಾಸಿ,

(signature) 24/6/19

(ಮುಬಾರಕ್ ಅಹ್ಮದ್)

ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ.